# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 781
2. ಸದಸ್ಯರ ಹೆಸರು : ಶ್ರೀ ಐವಾನ್ ಡಿಸೋಜ.
3. ಉತ್ತರಿಸ ಬೇಕಾದ ದಿನಾಂಕ : 13.03.2025
4. ಉತ್ತರಿಸುವ ಸಚಿವರು : ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲಾದ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು; ಇವುಗಳ ನಿರ್ವಹಣೆಗಾಗಿ ಮಾಡಿರುವ ಖರ್ಚು ಎಷ್ಟು; (ವಿವರ ನೀಡುವುದು) | ಸಣ್ಣ ನೀರಾವರಿ ಇಲಾಖೆಯ ಮಂಗಳೂರು ವಿಭಾಗ ವ್ಯಾಪ್ತಿಯಡಿ ಬರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 509 ಕಿಂಡಿ ಅಣೆಕಟ್ಟುಗಳನ್ನು ನಿರ್ಮಿಸಲಾಗಿದ್ದು, 2024-25ನೇ ಸಾಲಿನಲ್ಲಿ ರೂ. 471.24 ಲಕ್ಷ ಅಂದಾಜು ಮೊತ್ತದಲ್ಲಿ ಅಣೆಕಟ್ಟುಗಳ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ. |
| ಆ) | ಸಣ್ಣ ನೀರಾವರಿ ಇಲಾಖೆಯಿಂದ ನಿರ್ಮಿಸಲಾದ ಎಷ್ಟು ಕಿಂಡಿ ಅಣೆಕಟ್ಟುಗಳಿಗೆ ಗೇಟ್‌ಗಳನ್ನು ಅಳವಡಿಸಲಾಗಿದೆ; ಗೇಟ್ ಅಳವಡಿಸಲು ಬಾಕಿ ಇರುವ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು; ಬಾಕಿ ಉಳಿಯಲು ಕಾರಣವೇನು; (ವಿವರ ನೀಡುವುದು) | ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿರ್ಮಿಸಲಾದ 509 ಕಿಂಡಿ ಅಣೆಕಟ್ಟುಗಳಲ್ಲಿ 505 ಕಿಂಡಿ ಅಣೆಕಟ್ಟುಗಳಿಗೆ ಗೇಟುಗಳನ್ನು ಅಳವಡಿಸಿ ನೀರನ್ನು ಶೇಖರಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಬಾಕಿ ಉಳಿದ 4 ಕಿಂಡಿ ಅಣೆಕಟ್ಟುಗಳಲ್ಲಿ, 2 ಹಳೆಯ ಕಿಂಡಿ ಅಣೆಕಟ್ಟುಗಳು ಶಿಥಿಲಾವಸ್ಥೆಯಲ್ಲಿರುವ ಕಾರಣ ಅವುಗಳಿಗೆ ಹಲಗೆಗಳನ್ನು ಅಳವಡಿಸಲು ಸಾಧ್ಯವಾಗಿರುವುದಿಲ್ಲ, 1 ಕಿಂಡಿ ಅಣೆಕಟ್ಟಿನಲ್ಲಿ ಹೇರಳವಾಗಿ ಹೂಳು ತುಂಬಿದ್ದು, ಹಲಗೆಗಳನ್ನು ಅಳವಡಿಸಲು ಸಾಧ್ಯವಾಗಿರುವುದಿಲ್ಲ ಹಾಗೂ ಉಳಿದ 1 ಕಿಂಡಿ ಅಣೆಕಟ್ಟಿನ ಕೆಳಪಾತ್ರದಲ್ಲಿ ಕೃಷಿಕರು ತಾತ್ಕಾಲಿಕ ಮಣ್ಣಿನ ಬದುವನ್ನು ನಿರ್ಮಿಸಿರುವುದರಿಂದ ಹಲಗೆಗಳನ್ನು ಅಳವಡಿಸಲು ಸಾಧ್ಯವಾಗಿರುವುದಿಲ್ಲ. |
| ಇ) | ಬಂಟ್ವಾಳ ತಾಲ್ಲೂಕಿನ ಕಾವಳಮೂಡುರು ಗ್ರಾಮದ ಪಂಜಾಡಿ ಎಂಬಲ್ಲಿರುವ ಕಿಂಡಿ ಅಣೆಕಟ್ಟಿಗೆ ಗೇಟ್ ಅಳವಡಿಸದೇ ನಿರ್ವಹಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಏನು ಕ್ರಮಕೈಗೊಂಡಿದೆ? (ತೆಗೆದುಕೊಂಡ ಕ್ರಮದ ಬಗ್ಗೆ ವಿವರ ನೀಡುವುದು) | ಬಂಟ್ವಾಳ ತಾಲ್ಲೂಕಿನ ಕಾವಳಮುಡೂರು ಗ್ರಾಮದ ಪಂಜಾಡಿ ಕಿಂಡಿ ಅಣೆಕಟ್ಟಿನ ಸುಮಾರು 350.00 ಮೀ ಕೆಳಪಾತ್ರದಲ್ಲಿ ಒಬ್ಬ ಕೃಷಿಕರು ತೋಡಿನ ಎರಡು ಬದಿಯಲ್ಲಿಯೂ ತಮ್ಮ ಕೃಷಿ ಭೂಮಿ ಇದ್ದ ಕಾರಣ ಕೃಷಿ ಭೂಮಿಯ ಅಭಿವೃದ್ಧಿ ಕೆಲಸಕ್ಕಾಗಿ ಸದರಿ ಸ್ಥಳದಲ್ಲಿ ಹರಿಯುವ ತೋಡಿಗೆ ಅಡ್ಡಲಾಗಿ ಒಂದು ತಾತ್ಕಾಲಿಕ ಮಣ್ಣಿನ ಬದುವನ್ನು ನಿರ್ಮಾಣ ಮಾಡಿರುತ್ತಾರೆ. ಆದ್ದರಿಂದ ಸದರಿ ಪಂಜಾಡಿ ಕಿಂಡಿ ಅಣೆಕಟ್ಟಿನಲ್ಲಿ ನೀರು ಶೇಖರಣೆಯಾಗಿ ಹಲಗೆ ಅಳವಡಿಸಲು ಸಾಧ್ಯವಾಗಿರುವುದಿಲ್ಲ. ಮುಂದಿನ ಸಾಲಿನಲ್ಲಿ ಕ್ಲಪ್ತ ಸಮಯದಲ್ಲಿ ಅಣೆಕಟ್ಟಿಗೆ ಹಲಗೆಗಳನ್ನು ಅಳವಡಿಸಿ ನೀರು ಶೇಖರಣೆ ಮಾಡಿ ಕೃಷಿ ಚಟುವಟಿಕೆಗಳಿಗೆ ಉಪಯೋಗವಾಗುವಂತೆ ಕ್ರಮ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ: MID/28/LCQ/2025

(ಎನ್.ಎಸ್ ಭೋಸರಾಜು)
ಸಣ್ಣ ನೀರಾವರಿ, ವಿಜ್ಞಾನ ಮತ್ತು
ತಂತ್ರಜ್ಞಾನ ಸಚಿವರು